ಉಲ್ಲಂಘಿಸಿರುವುದರಿಂದ ಬೇರೊಂದು ಕಂಪನಿಗೆ ಗುತ್ತಿಗೆ ನೀಡುವ ಇರಾದೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

ಶ್ರೀ ಸಿ. ಎಂ. ಉದಾಸಿ (ಲೋಕೋಪಯೋಗಿ ಸಚಿವರು):–

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ದಿನಾಂಕ 29–10–2009 ರಂದು ನಡೆದ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ 77ನೇ ಮಂಡಳಿಯ ಸಭೆಯಲ್ಲಿ ನಿರ್ಧರಿಸಿದಂತೆ ಇನ್ನೂ ಪ್ರಾರಂಭವಾಗದೇ ಇರುವ ಕಾಮಗಾರಿಗಳನ್ನು ಗುತ್ತಿಗೆದಾರರಿಂದ ಹಿಂಪಡೆದ ಕಾಮಗಾರಿಗಳಲ್ಲಿ ಸದರಿ ಕಾಮಗಾರಿಯು ಒಂದಾಗಿದ್ದು ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸುವ ಪ್ರಸಂಗ ಉದ್ಭವಿಸುವುದಿಲ್ಲ.

ಇ) ಈ ಕಾಮಗಾರಿಯು 2011–12ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಅನುಮೋದನೆ ಪಡೆದ ನಿಗಮದ ವತಿಯಿಂದ ಕೈಗೊಳ್ಳಲು ಉದ್ದೇಶಿಸಿರುವ 20 ಸೇತುವೆ ಕಾಮಗಾರಿಗಳ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದು ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಅನುದಾನದ ಲಭ್ಯತೆಗನುಗುಣವಾಗಿ ಅನುಮೋದನೆ ನೀಡಿದೆ ನಂತರ ಕಾಮಗಾರಿಗೆ ಟೆಂಡರ್ ಅಹ್ವಾನಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ಯೋಜನಾ ವರದಿಗೆ ಸೂಕ್ತ ಅನುಮೋದನೆ ನೀಡಿದ ನಂತರ ಸದರಿ ಕಾಮಗಾರಿಗೆ ನಿಯಮಾನುಸಾರ ಟೆಂಡರನ್ನು ಆಹ್ವಾನಿಸಿ, ಆಯ್ಕೆಯಾಗುವ ಗುತ್ತಿಗೆದಾರರಿಗೆ ಕೆಲಸ ವಹಿಸಲು ಕ್ರಮ ಕೈಗೊಳ್ಳಲಾಗುವುದು.

ರಸ್ತೆಗಳ ಕಾಮಗಾರಿ

233 (608) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ):– ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಕಳೆದ ಸಾಲಿಗೆ ಲೋಕೋಪಯೋಗಿ ಇಲಾಖೆಯಿಂದ ರಸ್ತೆ ಕಾಮಗಾರಿಗಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; (ನಬಾರ್ಡ್ ಹೊರತುಪಡಿಸಿ, ಲೆಕ್ಕ ಶೀರ್ಷಿಕೆವಾರು ವಿವರ ನೀಡುವುದು) ;

ಆ) ರಾಜ್ಯದಲ್ಲಿ ವಿಧಾನಸಭಾ ಕ್ಷೇತ್ರವಾರು ಇದುವರೆವಿಗೂ ಖರ್ಚು ಮಾಡಲಾದ ಹಣವೆಷ್ಟು ; ಬಾಕಿ ಇರುವ ಹಣವೆಷ್ಟು ; (ಕ್ಷೇತ್ರವಾರು ವಿವರ ನೀಡುವುದು) ?

ಶ್ರೀ ಸಿ. ಎಂ. ಉದಾಸಿ (ಲೋಕೋಪಯೋಗಿ ಸಚಿವರು):–

ಅ) ರಾಜ್ಯದಲ್ಲಿ ಕಳೆದ ಸಾಲಿಗೆ ಲೋಕೋಪಯೋಗಿ ಇಲಾಖೆಯಿಂದ ರಸ್ತೆ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಿದ ಹಣದ ವಿವರಗಳನ್ನು ಅನುಬಂಧ–1 ರಲ್ಲಿ ವಿವರಿಸಿದೆ.

ಆ) ರಾಜ್ಯದಲ್ಲಿ ವಿಧಾನಸಭಾ ಕ್ಷೇತ್ರವಾರು ಇದುವರೆವಿಗೂ ಖರ್ಚು ಮಾಡಲಾದ ಹಣದ ವಿವರಗಳನ್ನು ಅನುಬಂಧ–2 ರಲ್ಲಿ ವಿವರಿಸಿದೆ. ಹಾಗೂ ಬಾಕಿ ಹಣ ಉದ್ಭವಿಸುವುದಿಲ್ಲ.

ರಸ್ತೆಗಳ ದುರಸ್ತಿ

234 (609) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ):– ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಬಹುತೇಕ ಮುಖ್ಯ ರಸ್ತೆಗಳು ಸಂಚಾರಕ್ಕೆ ಯೋಗ್ಯ ಸ್ಥಿತಿಯಲ್ಲಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ 2012–13ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡುವುದು ;

ಇ) ತಾಳಿಕೋಟೆ–ಮುದ್ದೇಬಿಹಾಳ ಮುಖ್ಯ ರಸ್ತೆ ಸಂಪೂರ್ಣ ಹಾಳಾಗಿರುವುದು ಸರ್ಕಾರಿ/ಖಾಸಗಿ ವಾಹನಗಳು ರಿಪೇರಿಗೆ ಬಂದು ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ನಷ್ಟದ ಮಾನದಂಡವೇನು ;

ಈ) ಹಾಗಿದ್ದಲ್ಲಿ ಎಂದಿನಿಂದ ಈ ರಸ್ತೆಯ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು (ಸಂಪೂರ್ಣ ವಿವರ ನೀಡುವುದು) ?

ಶ್ರೀ ಸಿ. ಎಂ. ಉದಾಸಿ (ಲೋಕೋಪಯೋಗಿ ಸಚಿವರು):–

ಅ) ಬಂದಿದೆ.

ಆ) 2012–13ನೆ ಸಾಲಿನಲ್ಲಿ ಅನುದಾನದ ಲಭ್ಯತೆ ಮೇರೆಗೆ ಕ್ರಮ ಕೈಗೊಳ್ಳಲಾಗುವುದು.

ಇ) ಬಂದಿದೆ.

ಈ) ತಾಳಿಕೋಟೆ ಮುದ್ದೇಬಿಹಾಳ (ರಾಜ್ಯ ಹೆದ್ದಾರಿ – 60ರ ಭಾಗ) ರಸ್ತೆಯು 30.00 ಕಿ.ಮೀ. ಉದ್ದವಿದ್ದು, 2011–12ನೇ ಸಾಲಿನಲ್ಲಿ ವಾರ್ಷಿಕ ನಿರ್ವಹಣೆಯನ್ನು ಈಗಾಗಲೇ ಕೈಗೊಳ್ಳಲಾಗಿದ್ದು, ರಸ್ತೆಯ ಗುಂಡಿಗಳನ್ನು ತುಂಬಿ ಹಾಗೂ ಅಯ್ದ ಭಾಗಗಳಲ್ಲಿ